## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

### ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.94 ಹೆಣ್ಣೂರು ಸಂಬಂಧಿಸಿದಂತೆ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 30.11.2022 ರಂದು ಆಯೋಜಿಸಿದ್ದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಸಭೆಯಲ್ಲಿ ಹಾಜರಿದ್ದವರ ವಿವರ:-**

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ಪ್ರಸನ್ನ.ವಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಉಪ-ವಿಭಾಗ ಸಿ.ವಿ.ರಾಮನ್ ನಗರ ಹಾಗೂ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ.94 |
| 2 | ಶ್ರೀ.ಕೆ.ಎಲ್.ಸ್ವಾಮಿಲಾಲ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ. 94 ಹೆಚ್.ಬಿ.ಆರ್ ಬಡಾವಣೆ |
| 3 | ಶ್ರೀ.ಬಿ.ಎನ್.ಗೋಪಾಲ್ | ಕೆಲಸ ಪರಿವೀಕ್ಷಕರು ವಾರ್ಡ್ ಸಂಖ್ಯೆ.94 |
| 4 | ಶ್ರೀ.ಆರ್.ಎಸ್.ಮಂಜುನಾಥ್ | ಹೆಣ್ಣೂರು ಪೋಲೀಸ್ ಚೌಕಿ |
| 5 | ಶ್ರೀಮತಿ.ಮೀನಾ.ಬಿ | ಕಿರಿಯ ಆರೋಗ್ಯ ಪರಿವೀಕ್ಷಕರು ವಾ- 94 |
| 6 | ಶ್ರೀ.ಅಭಿಷೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾ-94 |
| 7 | ಶ್ರೀ.ಎಸ್.ಜೆ.ತೋಳ್ವಾಡಿ | ಹೆಚ್.ಬಿ.ಆರ್ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘ |
| 8 | ಶ್ರೀ.ರಿಯಾಜ್ ಅಹ್ಮದ್.ಎಂ.ಬಿ | ಮಾರ್ಷಲ್ |
| 9 | ಶ್ರೀ.ಪ್ರಸನ್ನ | ಹೆಚ್.ಬಿ.ಆರ್ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘ |
| 10 | ಶ್ರೀ.ಸತೀಶ್ ತಿಮ್ಮೇಗೌಡ | 5ನೇ ಬ್ಲಾಕ್ ಆರ್.ಡಬ್ಲ್ಯೂ.ಎ |
| 11 | ಶ್ರೀ.ಹೆಚ್.ಕೆ.ಗಂಗಾಧರ್ | ಹೆಣ್ಣೂರು ಗ್ರಾಮ ಸ್ಥಳೀಯರು |
| 12 | ಶ್ರೀ.ವಿಕ್ರಂ | ಸ್ಥಳೀಯರು |
| 13 | Sri.S.Pugazhendhi | ಸ್ಥಳೀಯರು |

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ / ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. **ಅರಣ್ಯ ಇಲಾಖೆ:-** ವಾರ್ಡ್ ವ್ಯಾಪ್ತಿಯಲ್ಲಿನ ಹಲವು ಪ್ರದೇಶಗಳಲ್ಲಿ ಮರಗಳ ರೆಂಬೆಗಳು ಒಣಗಿದ್ದು, ತುರ್ತಾಗಿ ಅವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಸಭೆಯಲ್ಲಿ ತಿಳಿಸಿದರು.

   ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಉಪ-ಅರಣ್ಯಾಧಿಕಾರಿಗಳು (ಪೂರ್ವ) ವಲಯ ರವರಿಗೆ ಮಾಹಿತಿಯನ್ನು ಒದಗಿಸಬೇಕೆಂದು ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

   **(ಕ್ರಮ:- ಅರಣ್ಯ ಇಲಾಖೆ (ಪೂರ್ವ) ಇಲಾಖೆ ಬೆಂಗಳೂರು)**

2. <u>ಕಾಮಗಾರಿ ಇಲಾಖೆ:-</u> ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಕಡೆ ಫುಟ್‌ಪಾತ್ ಅನ್ನು ಒತ್ತುವರಿ ಮಾಡಿಕೊಂಡಿರುವುದು ಕಂಡು ಬಂದಿದ್ದು, ಅವುಗಳನ್ನು ಕೂಡಲೇ ತೆರವುಗೊಳಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.
ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ-ವಿಭಾಗ ರವರಿಗೆ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
<u>(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ-ವಿಭಾಗ ಬೆಂಗಳೂರು)</u>

3. <u>ರಸ್ತೆಮೂಲಭೂತ ಸೌಕರ್ಯ ವಿಭಾಗ:-</u> ವಾರ್ಡ್ ವ್ಯಾಪ್ತಿಯಲ್ಲಿ, ಮೇಜರ್ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಟೆಂಡರ್ ಶೂರ್ ಯೋಜನೆ ಅಡಿಯಲ್ಲಿ ರಸ್ತೆಯ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿಯು ಟೆಕ್ನಿಕಲ್ ನೋಟಿಫಿಕೇಷನ್ ಹಾಗೂ ಸ್ಪೆಸಿಫಿಕೇಷನ್ ಬಗ್ಗೆ ಮಾಹಿತಿ ಒದಗಿಸಲು ಸಭೆಯಲ್ಲಿ ತಿಳಿಸಿದರು.
ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ವಿಭಾಗ (ಪೂರ್ವ) ವಲಯ ರವರಿಗೆ ಕ್ರಮ ಕೈಗೊಳ್ಳಲು ತಿಳಿಸುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
<u>(ಕ್ರಮ:- ರಸ್ತೆ ಮೂಲಭೂತ ಸೌಕರ್ಯ ವಿಭಾಗ (ಪೂರ್ವ) ವಲಯ ಬೆಂಗಳೂರು)</u>

4. <u>ಆರೋಗ್ಯ ಇಲಾಖೆ:-</u> ವಾರ್ಡ್ ವ್ಯಾಪ್ತಿಯ ಭೈರವೇಶ್ವರ ಲೇಔಟ್ 2ನೇ, 3ನೇ ಮುಖ್ಯರಸ್ತೆ ಹಾಗೂ ವಾರ್ಡ್‌ವಾರು ಸೊಳ್ಳೆಗಳ ಹಾವಳಿ ಹೆಚ್ಚಾಗಿರುವುದರಿಂದ ಔಷಧಿ, ಫಾಗಿಂಗ್ ಮತ್ತು ಸ್ಪ್ರೇಯಿಂಗ್ ಸಿಂಪಡಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.
ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ರವರಿಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.
<u>(ಕ್ರಮ:- ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು)</u>

5. <u>ಬಿ.ಡಬ್ಲ್ಯೂ.ಎಸ್.ಎಸ್.ಬಿ:-</u> ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ.ರವರು ಹಾಗೂ ಬೃಹತ್ ಮಳೆನೀರು ಗಾಲುವೆ ಇಲಾಖೆಯ ಬಗ್ಗೆ ಚರ್ಚಿಸಲು ಇಲಾಖೆಯವರು ಅನುಪಸ್ಥಿತಿಯಿದ್ದುದರಿಂದ ಇಲಾಖೆಯ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೆ ಹಾಜರಾಗಲು ಸೂಚಿಸಿರುತ್ತಾರೆ.
<u>(ಕ್ರಮ:- ಸ.ಕಾ.ಅ ಬಿ.ಡಬ್ಲ್ಯೂ.ಎಸ್.ಎಸ್.ಬಿ ಉಪ-ವಿಭಾಗ ಕಲ್ಯಾಣನಗರ ಬೆಂಗಳೂರು)</u>

6. <u>ಬೃಹತ್ ಮಳೆನೀರು ಗಾಲುವೆ ವಿಭಾಗ (ಬಿ.ಬಿ.ಎಂ.ಪಿ)</u> ವಾರ್ಡ್ ವ್ಯಾಪ್ತಿಯ ರಾಜಕಾಲುವೆಯಲ್ಲಿ ಡೀಸಿಲ್ಟಿಂಗ್ ನಿಯತಕಾಲಕ್ಕೆ ಪೂರ್ಣ ಪ್ರಮಾಣದಲ್ಲಿ ಮಾಡದೇ ಇರುವುದರಿಂದ ರಾಜ ಕಾಲುವೆಗೆ ಸರಾಗವಾಗಿ ನೀರು ಹರಿಯುತ್ತಿಲ್ಲವಾದ್ದರಿಂದ ರಸ್ತೆಯ ಚರಂಡಿಗಳಲ್ಲಿ ಹಿಮ್ಮುಖವಾಗಿ ನೀರು ಹರಿಯುತ್ತಿದೆ ಎಂದು ತಿಳಿಸಿರುತ್ತಾರೆ.
ಸದರಿ ವಿಷಯದ ಬಗ್ಗೆ ವಾರ್ಡ್ ಸಮಿತಿ ಸಭೆಗೆ ಹಾಜರಾಗಿರದ ಅಧಿಕಾರಿಗಳನ್ನು ವಾರ್ಡ್ ಸಮಿತಿ ಸಭೆಗೆ ತಪ್ಪದೆ ಹಾಜರಾಗಲು ನೋಡಲ್ ಅಧಿಕಾರಿ ರವರು ತಿಳಿಸಿರುತ್ತಾರೆ.
<u>(ಕ್ರಮ:- ಸ.ಕಾ.ಅ ಬೃಹತ್ ಮಳೆನೀರು ಗಾಲುವೆ ವಿಭಾಗ (ಬಿ.ಬಿ.ಎಂ.ಪಿ)</u>

7. <u>ವಿದ್ಯುತ್ ವಿಭಾಗ:-</u> ವಾರ್ಡ್ ವ್ಯಾಪ್ತಿಯಲ್ಲಿ ಹಾಗೂ ಹೆಣ್ಣೂರು ಸುತ್ತಮುತ್ತಲಿನ ಪ್ರದೇಶದಲ್ಲಿ ಬಹುತೇಕ ಎಲ್.ಇ.ಡಿ ಬೀದಿ ದೀಪಗಳು ದುರಸ್ಥಿಯಲ್ಲಿದ್ದು, ಸಮಯಕ್ಕೆ ಸರಿಯಾಗಿ ಬಲ್ಪ್ ಹಾಗೂ ಸ್ವಿಚಸ್‌ಗಳು ಬದಲಾಯಿಸುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ವಾರ್ಡ್ ಸಮಿತಿ ಸಭೆಗೆ ವಿದ್ಯುತ್ ವಿಭಾಗದ ಅಧಿಕಾರಿಗಳು ಹಾಜರಾಗಿರದ ಕಾರಣ ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೆ ಹಾಜರಾಗುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ:- ಕಾ.ಪಾ.ಅ ವಿದ್ಯುತ್ ವಿಭಾಗ)

8. ಪಶುಪಾಲನಾ ಇಲಾಖೆ:- ವಾರ್ಡ್ ವ್ಯಾಪ್ತಿಯಲ್ಲಿ ಹಸುಗಳು ರಸ್ತೆಯಲ್ಲಿ ಸಂಚರಿಸುತ್ತಿದ್ದು, ಇದರಿಂದ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಮತ್ತು ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುವುದಾಗಿ ತಿಳಿಸಿರುತ್ತಾರೆ.

ಮೇಲ್ಕಂಡ ವಿಷಯದ ಬಗ್ಗೆ ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತರಲಾಗುವುದು ಎಂದು ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

(ಕ್ರಮ:- ಪಶುಪಾಲನಾ ಇಲಾಖೆ ಬಿ.ಬಿ.ಎಂ.ಪಿ (ಪೂರ್ವ) ವಲಯ ಬೆಂಗಳೂರು)

9. ಕೆ.ಜಿ.ಹಳ್ಳಿ ಪೊಲೀಸ್ ಠಾಣೆ:- ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ವಾಹನಗಳನ್ನು ನಿಲ್ಲಿಸುತ್ತಿದ್ದು, ಅನುಪಯುಕ್ತ ವಾಹನಗಳನ್ನು ಗುರುತಿಸಿ ಅವುಗಳನ್ನು ತೆರವುಗೊಳಿಸಲು ಸಾರ್ವಜನಿಕರು ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ:- ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೊಲೀಸ್ ಠಾಣೆ, ಬೆಂಗಳೂರು)

ಮುಂದುವರೆದು ದಿನಾಂಕ: 30-11-2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ಮಾಡಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

ಶ್ರೀ.ಕೆ.ಎಲ್.ಸ್ವಾಮಿಲಾಲ್
ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 94 ಹೆಣ್ಣೂರು

ಶ್ರೀ.ಪ್ರಸನ್ನ.ಬಿ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಘನತ್ಯಾಜ್ಯ ನಿರ್ವಹಣೆ ಉಪ-ವಿಭಾಗ
ಸಿ.ವಿ.ರಾಮನ್ ನಗರ ಹಾಗೂ ನೋಡಲ್ ಅಧಿಕಾರಿ

ಪ್ರತಿಯನ್ನು:
1. ಮಾನ್ಯ ಶಾಸಕರು, ಸರ್ವಜ್ಞನಗರ ವಿಧಾನ ಸಭಾಕ್ಷೇತ್ರ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗೆ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) 16ನೇ ಮಹಡಿ, ಪಿ.ಯು.ಬಿ. ಬಿಲ್ಡಿಂಗ್ ಮೆಯೋಹಾಲ್ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ವಿಭಾಗ ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೃಹತ್ ಮಳೆ ನೀರುಗಾಲುವೆ ವಿಭಾಗ ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕಲ್ಯಾಣನಗರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
11. ಆರಕ್ಷಕ ವೃತ್ತ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಕೆ.ಜಿ.ಹಳ್ಳಿ ಪೊಲೀಸ್ ಠಾಣೆ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
12. ಪಶು ವೈದ್ಯಾಧಿಕಾರಿಗಳು ಬಿ.ಬಿ.ಎಂ.ಪಿ ಪೂರ್ವ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
13. ಕಛೇರಿ ಕಡತಕ್ಕೆ.

Scanned with OKEN Scanner